**All India Radio: Bangalore**
**National Bulletin In Kannada**
**13.05.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**13.05.2026 7.35 am**

**<>><><*><><<>**

ಮುಖ್ಯಾಂಶಗಳು

**೧. ನೀಟ್-ಯುಜಿ ೨೦೨೬ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣ: ಸಿಬಿಐನಿಂದ ಎಫ್‌ಐಆರ್ ದಾಖಲು**

**೨. ತಮಿಳುನಾಡು ವಿಧಾನಸಭೆಯಲ್ಲಿ ಬಹುಮತ ಸಾಬೀತಿಗಾಗಿ ಇಂದು ಟಿವಿಕೆ ಸರ್ಕಾರಕ್ಕೆ ವಿಶ್ವಾಸ ಮತ ಪರೀಕ್ಷೆ**

**೩. ಪಶ್ಚಿಮ ಬಂಗಾಳದ ಕಾನೂನು ಸುವ್ಯವಸ್ಥೆ ಸುಧಾರಣೆಗೆ ಪೊಲೀಸ್ ಇಲಾಖೆಯಿಂದ ಕಟ್ಟುನಿಟ್ಟಿನ ಕ್ರಮ**

**೪. ವಾರ್ಷಿಕ ಮತ್ತು ನಾಲ್ಕನೇ ತ್ರೈಮಾಸಿಕ ಜಿಡಿಪಿ ಅಂದಾಜುಗಳ ಬಿಡುಗಡೆ ದಿನಾಂಕ ಪರಿಷ್ಕರಿಸಿದ ಕೇಂದ್ರ ಸರ್ಕಾರ**

**೫. ಹದಿನೇಳು ವರ್ಷದೊಳಗಿನವರ ಏಷ್ಯನ್ ಬಾಕ್ಸಿಂಗ್ ಚಾಂಪಿಯನ್‌ಶಿಪ್; ಭಾರತದ ಲಕ್ಷಯ್ ಪೋಗಟ್ ಫೈನಲ್‌ಗೆ ಲಗ್ಗೆ**

**<>><><*><><<>**

ರಾಷ್ಟ್ರೀಯ ಅರ್ಹತಾ ಪ್ರವೇಶ ಪರೀಕ್ಷೆ ನೀಟ್-ಯುಜಿ ೨೦೨೬ರ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಅಕ್ರಮಗಳ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರೀಯ ತನಿಖಾ ದಳ- ಸಿಬಿಐ ಎಫ್‌ಐಆರ್ ದಾಖಲಿಸಿಕೊಂಡಿದೆ. ಕೇಂದ್ರ ಶಿಕ್ಷಣ ಸಚಿವಾಲಯದ ಉನ್ನತ ಶಿಕ್ಷಣ ಇಲಾಖೆ ನೀಡಿದ ಲಿಖಿತ ದೂರಿನ ಆಧಾರದ ಮೇಲೆ ಈ ಕ್ರಮ ಕೈಗೊಳ್ಳಲಾಗಿದ್ದು, ಅಪರಾಧ ಸಂಚು, ವಂಚನೆ, ನಂಬಿಕೆ ದ್ರೋಹ, ಸಾಕ್ಷ್ಯ ನಾಶ ಹಾಗೂ ಸಾರ್ವಜನಿಕ ಪರೀಕ್ಷೆ ಅಕ್ರಮ ತಡೆ ಕಾಯ್ದೆ ೨೦೨೪ರ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಲಾಗಿದೆ. ಪ್ರಕರಣದ ಸಮಗ್ರ ತನಿಖೆಗಾಗಿ ವಿಶೇಷ ಸಿಬಿಐ ತಂಡಗಳನ್ನು ರಚಿಸಲಾಗಿದ್ದು, ವಿವಿಧ ಸ್ಥಳಗಳಿಗೆ ರವಾನಿಸಲಾಗಿದೆ. ಈ ಅಕ್ರಮದಲ್ಲಿ ಭಾಗಿಯಾಗಿರುವ ವ್ಯಕ್ತಿಗಳು ಮತ್ತು ಸಂಸ್ಥೆಗಳ ಪಾತ್ರವನ್ನು ಪತ್ತೆಹಚ್ಚಲು ತನಿಖಾ ಸಂಸ್ಥೆಯು ಮುಂದಾಗಿದೆ. ಈ ಮಧ್ಯೆ, ನವದೆಹಲಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಎನ್‌ಟಿಎಯ ಮಹಾನಿರ್ದೇಶಕ ಅಭಿಷೇಕ್ ಸಿಂಗ್ ಅವರು, ಪರೀಕ್ಷಾ

ಪ್ರಕ್ರಿಯೆಯ ಪಾರದರ್ಶಕತೆಯ ಮೇಲೆ ಸಣ್ಣ ಅನುಮಾನವಿದ್ದರೂ ಪರೀಕ್ಷೆಯನ್ನು ರದ್ದುಗೊಳಿಸುವುದು ಸೂಕ್ತ ನಿರ್ಧಾರವಾಗಿದೆ ಎಂದು ತಿಳಿಸಿದರು. ರದ್ದಾಗಿರುವ ಪರೀಕ್ಷೆಯ ಶುಲ್ಕವನ್ನು ವಿದ್ಯಾರ್ಥಿಗಳಿಗೆ ಮರುಪಾವತಿಸಲಾಗುವುದು ಮತ್ತು ಯಾವುದೇ ಹೆಚ್ಚುವರಿ ಶುಲ್ಕವಿಲ್ಲದೆ ಪಾರದರ್ಶಕವಾಗಿ ಮರುಪರೀಕ್ಷೆ ನಡೆಸಲಾಗುವುದು ಎಂದು ಅವರು ಭರವಸೆ ನೀಡಿದ್ದಾರೆ. ಈ ತಿಂಗಳ ೩ ರಂದು ನಡೆದಿದ್ದ ನೀಟ್ ಪರೀಕ್ಷೆಯ ಕುರಿತು ತನಿಖೆ ಚುರುಕುಗೊಂಡಿದೆ. ರಾಜಸ್ಥಾನದ ಪೊಲೀಸರ ವಿಶೇಷ ಕಾರ್ಯಾಚರಣೆ ತಂಡವು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇದುವರೆಗೆ ೧೫ ಜನರನ್ನು ವಶಕ್ಕೆ ಪಡೆದಿದೆ. ಪ್ರಶ್ನೆ ಪತ್ರಿಕೆ ಹಂಚಿಕೆಗಾಗಿ ನಡೆದಿದ್ದ ಹಣಕಾಸಿನ ವ್ಯವಹಾರ ಮತ್ತು ಜಾಲದ ಬಗ್ಗೆ ಅಧಿಕಾರಿಗಳು ವಿಚಾರಣೆ ನಡೆಸುತ್ತಿದ್ದಾರೆ. ಜೈಪುರದಲ್ಲಿ ಮನೀಷ್ ಎಂಬ ಶಂಕಿತ ಆರೋಪಿಯನ್ನು ವಶಕ್ಕೆ ಪಡೆಯಲಾಗಿದ್ದು, ಇದಕ್ಕೂ ಮೊದಲು ಡೆಹ್ರಾಡೂನ್‌ನಲ್ಲಿ ಸಿಕಾರ್ ಮೂಲದ ಕೆರಿಯರ್ ಕೌನ್ಸೆಲರ್ ರಾಕೇಶ್ ಕುಮಾರ್ ಸೇರಿದಂತೆ ಐವರನ್ನು ಬಂಧಿಸಲಾಗಿತ್ತು. ಬಂಧಿತರಲ್ಲಿ ನಾಲ್ವರು ನೀಟ್ ಆಕಾಂಕ್ಷಿಗಳೂ ಸೇರಿದ್ದಾರೆ ಎಂದು ಮೂಲಗಳು ತಿಳಿಸಿವೆ.

**<><><*><><>**

ತಮಿಳುನಾಡಿನ ಟಿವಿಕೆ ಸರ್ಕಾರ, ಇಂದು ವಿಧಾನಸಭೆಯಲ್ಲಿ ತನ್ನ ಬಹುಮತವನ್ನು ಸಾಬೀತುಪಡಿಸಲಿದೆ. ವಿಶ್ವಾಸಮತ ಪರೀಕ್ಷೆಗೂ ಮುನ್ನ ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್, ಬೆಂಬಲ ನೀಡುತ್ತಿರುವ ಪಕ್ಷಗಳ ನಾಯಕರೊಂದಿಗೆ ಸರಣಿ ಸಭೆಗಳನ್ನು ನಡೆಸಿ ಬೆಂಬಲ ಕ್ರೋಢೀಕರಿಸಿದ್ದಾರೆ. ಮಿತ್ರಪಕ್ಷಗಳ ಜೊತೆಗೆ ಎಐಎಡಿಎಂಕೆಯ ಬಂಡಾಯ ಬಣ ಮತ್ತು ಅಮ್ಮ ಮಕ್ಕಳ್ ಮುನ್ನೇಟ್ರಾ ಕಳಗಂ- ಎಮ್‌ಎಮ್‌ಕೆಯ ಏಕೈಕ ಶಾಸಕ ಎಸ್.ಕಾಮರಾಜ್ ಅವರ ಬೆಂಬಲದೊಂದಿಗೆ ಟಿವಿಕೆ ಸರ್ಕಾರವು ಪ್ರಸ್ತುತ ಸದನದಲ್ಲಿ ಸುಮಾರು ೧೫೦ ಶಾಸಕರ ಬೆಂಬಲವನ್ನು ಹೊಂದಿದೆ. ಈ ಮಧ್ಯೆ, ತಮಿಳುನಾಡು ರಾಜಕೀಯದಲ್ಲಿ ನಿನ್ನೆ ಪ್ರಮುಖ ಬೆಳವಣಿಗೆಗಳು ನಡೆದಿದ್ದು, ಸರ್ಕಾರಕ್ಕೆ ಬೆಂಬಲ ನೀಡುವ ವಿಷಯದಲ್ಲಿ ಎಐಎಡಿಎಂಕೆಯು ಎರಡು ಬಣಗಳಾಗಿ ವಿಭಜನೆಯಾಗಿದೆ. ಮಾಜಿ ಮುಖ್ಯಮಂತ್ರಿ ಮತ್ತು ಪಕ್ಷದ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ. ಪಳನಿಸ್ವಾಮಿ ನೇತೃತ್ವದ ಬಣವು ಟಿವಿಕೆ ಸರ್ಕಾರವನ್ನು ಬೆಂಬಲಿಸದಂತೆ ತನ್ನ ಶಾಸಕರಿಗೆ ವ್ಹಿಪ್ ಜಾರಿ ಮಾಡಿದೆ. ಪಕ್ಷದ ವ್ಹಿಪ್ ಉಲ್ಲಂಘಿಸುವ ಯಾವುದೇ ಶಾಸಕರು ಉಚ್ಚಾಟನೆ ಎದುರಿಸಬೇಕಾಗುತ್ತದೆ ಎಂದು ಹಿರಿಯ ನಾಯಕ ಅಗ್ರಿ ಕೃಷ್ಣಮೂರ್ತಿ ಎಚ್ಚರಿಸಿದ್ದಾರೆ. ಮತ್ತೊಂದೆಡೆ, ೩೦ ಶಾಸಕರ ಬೆಂಬಲವಿದೆ ಎಂದು ಪ್ರತಿಪಾದಿಸುತ್ತಿರುವ ಎರಡನೇ ಬಣ, ಎಸ್.ಪಿ.ವೇಲುಮಣಿ ಅವರನ್ನು ಎಐಎಡಿಎಂಕೆ ಶಾಸಕಾಂಗ ಪಕ್ಷದ ನಾಯಕರನ್ನಾಗಿ ಆಯ್ಕೆ ಮಾಡಿದೆ. ಮಾಜಿ ಸಚಿವ ಸಿ. ವಿ. ಷಣ್ಮುಗಂ ಅವರ ನಿವಾಸದಲ್ಲಿ ನಡೆದ ಸಭೆಯ ನಂತರ, ಈ ಬಣವು ವಿಶ್ವಾಸಮತದ ವೇಳೆ ಟಿವಿಕೆ ಸರ್ಕಾರವನ್ನು ಬೆಂಬಲಿಸುವುದಾಗಿ ಘೋಷಿಸಿದೆ. ಇದೇ

ವೇಳೆ, ಸರ್ಕಾರಕ್ಕೆ ಬೆಂಬಲ ಘೋಷಿಸಿದ್ದ ಎಐಎಮ್‌ಎಂಕೆಯ ಏಕೈಕ ಶಾಸಕ ಎಸ್. ಕಾಮರಾಜ್ ಅವರನ್ನು ಪಕ್ಷದಿಂದ ಉಚ್ಚಾಟಿಸಲಾಗಿದೆ.

<>><><*><><<>

ಪಶ್ಚಿಮ ಬಂಗಾಳದಲ್ಲಿ ಸರ್ಕಾರ ಬದಲಾದ ಬೆನ್ನಲ್ಲೇ, ರಾಜ್ಯ ಪೊಲೀಸ್ ಇಲಾಖೆಯು, ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಮತ್ತು ರಾಜಕೀಯ ಹಿಂಸಾಚಾರದ ಹಳೆಯ ಪ್ರಕರಣಗಳ ವಿಚಾರಣೆಯಲ್ಲಿ ಕಠಿಣ ನಿಲುವು ತಾಳಿದೆ. ಈ ಕುರಿತು ನಿನ್ನೆ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ, ಎಲ್ಲಾ ಪೊಲೀಸ್ ಕಮಿಷನರ್‌ಗಳು, ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ರೈಲ್ವೆ ಪೊಲೀಸರಿಗೆ ಸಮಗ್ರ ನಿರ್ದೇಶನವೊಂದನ್ನು ನೀಡಿದ್ದಾರೆ. ಈ ಆದೇಶದನ್ವಯ, ೨೦೨೧ರ ವಿಧಾನಸಭಾ ಚುನಾವಣೆಯ ನಂತರ ನಡೆದ ಹಿಂಸಾಚಾರದ ಎಲ್ಲಾ ಪ್ರಕರಣಗಳನ್ನು ಮರುಪರಿಶೀಲಿಸಲು ಸೂಚಿಸಲಾಗಿದೆ. ಈ ಹಿಂದೆ ತನಿಖೆ ನಡೆಸಿ ಅಂತಿಮ ವರದಿ ಸಲ್ಲಿಸಲಾದ ಅಥವಾ ತನಿಖೆಯಲ್ಲಿ ನಿರ್ಲಕ್ಷ್ಯ ವಹಿಸಲಾದ ಪ್ರಕರಣಗಳನ್ನು ಪುನರಾರಂಭಿಸಿ ಸಮಗ್ರ ತನಿಖೆ ನಡೆಸಲು ನಿರ್ದೇಶನ ನೀಡಲಾಗಿದ್ದು, ಇವುಗಳ ಉಸ್ತುವಾರಿಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹಾಗೂ ಆಯುಕ್ತರೇ ವಹಿಸಲಿದ್ದಾರೆ. ಇದೇ ವೇಳೆ, ರಾಜ್ಯ ಪೊಲೀಸ್ ಇಲಾಖೆಯು ಶಸ್ತ್ರಾಸ್ತ್ರಗಳ ಮೇಲೆ ನಿಯಂತ್ರಣ ಸಾಧಿಸಲು ಮುಂದಾಗಿದ್ದು, ಈ ಶುಕ್ರವಾರದೊಳಗೆ ಎಲ್ಲಾ ಪೊಲೀಸ್ ಠಾಣೆಗಳ ಶಸ್ತ್ರಾಗಾರಗಳಲ್ಲಿರುವ ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳ ಭೌತಿಕ ಪರಿಶೀಲನೆ ನಡೆಸಲು ಆದೇಶಿಸಿದೆ. ಇದರ ನಂತರ ಎರಡು ವಾರಗಳ ಕಾಲ ವಿಶೇಷ ಕಾರ್ಯಾಚರಣೆ ನಡೆಸಿ ರಾಜ್ಯದಲ್ಲಿರುವ ಅಕ್ರಮ ಶಸ್ತ್ರಾಸ್ತ್ರ ಮತ್ತು ಸ್ಫೋಟಕಗಳನ್ನು ವಶಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು. ಗಡಿಯಾಚೆಗಿನ ಕಳ್ಳಸಾಗಣೆ ತಡೆಗೆ ಗುಪ್ತಚರ ಮಾಹಿತಿ ವಿನಿಮಯ ಮಾಡಿಕೊಳ್ಳುವಂತೆ ಮತ್ತು ಅಕ್ರಮ ಜಾನುವಾರು ಮಾರುಕಟ್ಟೆಗಳು, ಅನಧಿಕೃತ ಕಸಾಯಿಖಾನೆಗಳು ಹಾಗೂ ಗಣಿಗಾರಿಕೆಯ ವಿರುದ್ಧ ಕಟ್ಟುನಿಟ್ಟಿನ ಕ್ರಮ ಜರುಗಿಸುವಂತೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ಇದರೊಂದಿಗೆ ಕಾನೂನುಬದ್ಧ ವ್ಯಾಪಾರಿಗಳಿಗೆ ಕಿರುಕುಳ ನೀಡುವ ದುಷ್ಕರ್ಮಿಗಳ ವಿರುದ್ಧ ಶಿಸ್ತುಕ್ರಮ ಮತ್ತು ಸಂಚಾರ ನಿಯಮಗಳ ಪಾಲನೆಗೂ ಆದ್ಯತೆ ನೀಡುವಂತೆ ಸೂಚಿಸಲಾಗಿದೆ.

<>><><*><><<>

ವಾರ್ಷಿಕ ಒಟ್ಟು ದೇಶೀಯ ಉತ್ಪನ್ನ-ಜಿಡಿಪಿಯ ತಾತ್ಕಾಲಿಕ ಅಂದಾಜುಗಳು ಮತ್ತು ನಾಲ್ಕನೇ ತ್ರೈಮಾಸಿಕದ ಜಿಡಿಪಿ ಅಂದಾಜುಗಳನ್ನು ಬಿಡುಗಡೆ ಮಾಡುವ ದಿನಾಂಕವನ್ನು ಕೇಂದ್ರ ಸರ್ಕಾರ ಪರಿಷ್ಕರಿಸಿದೆ. ಈ ಮೊದಲು ಪ್ರತಿ ವರ್ಷದ ಮೇ ತಿಂಗಳ ಕೊನೆಯ ಕೆಲಸದ ದಿನದಂದು ಈ ಅಂಕಿಅಂಶಗಳನ್ನು ಬಿಡುಗಡೆ ಮಾಡಲಾಗುತ್ತಿತ್ತು, ಆದರೆ ಇನ್ನು ಮುಂದೆ ಪ್ರತಿ ವರ್ಷ ಜೂನ್ ೭

ರಂದು ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ರಾಷ್ಟ್ರೀಯ ಸಾಂಖ್ಯಿಕ ಆಯೋಗದ ಸಲಹಾ ಸಮಿತಿಯೊಂದಿಗೆ ಸಮಗ್ರ ಸಮಾಲೋಚನೆ ನಡೆಸಿದ ನಂತರ ಈ ಬದಲಾವಣೆಯನ್ನು ತರಲಾಗಿದೆ ಎಂದು ಸಚಿವಾಲಯ ತಿಳಿಸಿದೆ. ದತ್ತಾಂಶಗಳ ಗುಣಮಟ್ಟವನ್ನು ಮತ್ತಷ್ಟು ಬಲಪಡಿಸುವ ಮತ್ತು ರಾಷ್ಟ್ರೀಯ ಲೆಕ್ಕಪತ್ರಗಳ ಕ್ರೋಡೀಕರಣದಲ್ಲಿ ಬಳಸಲಾಗುವ ಮಾಹಿತಿಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸುವ ಉದ್ದೇಶದಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ. ಅಂಕಿಅಂಶಗಳ ನಿಖರತೆ, ವ್ಯಾಪ್ತಿ ಮತ್ತು ಸದೃಢತೆಯನ್ನು ಸುಧಾರಿಸಲು ಸಚಿವಾಲಯವು ನಿರಂತರವಾಗಿ ನಡೆಸುತ್ತಿರುವ ಪ್ರಯತ್ನಗಳ ಭಾಗವಾಗಿ ಈ ಪರಿಷ್ಕರಣೆ ಮಾಡಲಾಗಿದೆ ಎಂದು ಸಚಿವಾಲಯ ತಿಳಿಸಿದೆ.

**<><><*><><<>**

ಮಹಾರಾಷ್ಟ್ರದ ಜತ್ ತಹಸೀಲ್‌ನಲ್ಲಿ ನಿನ್ನೆ ನಡೆದ ಧಾರ್ಮಿಕ ಸಮಾವೇಶದ ವೇಳೆ ಗೋಡೆಯೊಂದು ಕುಸಿದು ಆರು ಮಂದಿ ಭಕ್ತರು ಮೃತಪಟ್ಟಿದ್ದು, ೧೫ ಮಂದಿ ಗಾಯಗೊಂಡಿದ್ದಾರೆ. ಬಲವಾದ ಗಾಳಿಯೊಂದಿಗೆ ಭಾರೀ ಮಳೆ ಸುರಿಯುತ್ತಿದ್ದ ಸಂದರ್ಭದಲ್ಲಿ ಈ ದುರಂತ ಸಂಭವಿಸಿದೆ. ಘಟನಾ ಸ್ಥಳದಲ್ಲಿ ೩೦೦ ಕ್ಕೂ ಹೆಚ್ಚು ಭಕ್ತಾದಿಗಳು ಸೇರಿದ್ದರು ಎಂದು ವರದಿಯಾಗಿದೆ. ದುರ್ಘಟನೆಯಲ್ಲಿ ಮೃತಪಟ್ಟವರ ಕುರಿತು ಪ್ರಧಾನಿ ನರೇಂದ್ರ ಮೋದಿ ತೀವ್ರ ಶೋಕ ವ್ಯಕ್ತಪಡಿಸಿದ್ದು, ಗಾಯಗೊಂಡವರ ಶೀಘ್ರ ಚೇತರಿಕೆಗೆ ಪ್ರಾರ್ಥಿಸಿದ್ದಾರೆ.

**<><><*><><<>**

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಚೀನಾಗೆ ಮೂರು ದಿನಗಳ ಮಹತ್ವದ ಭೇಟಿಗಾಗಿ ಇಂದು ಬೀಜಿಂಗ್‌ಗೆ ಆಗಮಿಸಲಿದ್ದಾರೆ. ಈ ಪ್ರವಾಸದ ವೇಳೆ ಅಧ್ಯಕ್ಷ ಟ್ರಂಪ್, ಚೀನಾ ಅಧ್ಯಕ್ಷ ಕ್ಷಿ ಜಿನ್ ಪಿಂಗ್ ಅವರೊಂದಿಗೆ ದ್ವಿಪಕ್ಷೀಯ ವ್ಯಾಪಾರ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚಿಸಲಿದ್ದಾರೆ. ಅಧ್ಯಕ್ಷ ಕ್ಷಿ ಜಿನ್ ಪಿಂಗ್ ಅವರೊಂದಿಗೆ ಅಧ್ಯಕ್ಷ ಟ್ರಂಪ್ ಅವರ ಒಟ್ಟಾರೆ ಏಳನೇ ಭೇಟಿ ಇದಾಗಿದ್ದು, ೨೦೧೭ ರ ನಂತರ ಉಭಯ ನಾಯಕರು ಮೊದಲ ಬಾರಿಗೆ ಭೇಟಿಯಾಗುತ್ತಿದ್ದಾರೆ.

**<><><*><><<>**

ರಾಜಸ್ಥಾನದಲ್ಲಿ ತೀವ್ರ ಉಷ್ಣ ಅಲೆ  ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ರಾಜ್ಯದ ಗಡಿ ಜಿಲ್ಲೆಗಳಲ್ಲಿ ಜನರು ತೀವ್ರ ಶಾಖದಿಂದ ಕಂಗಾಲಾಗಿದ್ದು, ಹಲವೆಡೆ ತಾಪಮಾನ ೪೫ ರಿಂದ ೪೭ ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗಿದೆ.  ನಿನ್ನೆ ಬಾರ್ಮರ್‌ನಲ್ಲಿ ಗರಿಷ್ಠ ೪೮.೩ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗುವ ಮೂಲಕ ರಾಜ್ಯ ಶಾಖಮಯ ಪ್ರದೇಶವಾಗಿ ಗುರುತಿಸಿಕೊಂಡಿದೆ.

<>><><*><><<>

ಉಜ್ಬೇಕಿಸ್ತಾನದ ತಾಷ್ಕೆಂಟ್‌ನಲ್ಲಿ ನಡೆಯುತ್ತಿರುವ ಏಷ್ಯನ್ ಬಾಕ್ಸಿಂಗ್ ೧೭ ವರ್ಷದೊಳಗಿನವರ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಲಕ್ಷಯ್ ಫೋಗಟ್ ಫೈನಲ್‌ಗೆ ಲಗ್ಗೆ ಇಟ್ಟಿದ್ದಾರೆ. ಪುರುಷರ ೭೫ ಕೆಜಿ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿ ಲಕ್ಷಯ್ ಅವರು ಕೊರಿಯಾದ ಸೆಯುಂಗ್ಮಿನ್ ಲೀ ವಿರುದ್ಧ ೫-೦ ಅಂತರದ ಭರ್ಜರಿ ಜಯ ಸಾಧಿಸುವ ಮೂಲಕ ಭಾರತದ ಪರ ಫೈನಲ್ ತಲುಪಿದ ಏಕೈಕ ಬಾಕ್ಸರ್ ಆಗಿದ್ದಾರೆ. ಇದೇ ವಿಭಾಗದಲ್ಲಿ ಸ್ಪರ್ಧಿಸಿದ್ದ ಇತರ ನಾಲ್ವರು ಭಾರತೀಯ ಬಾಕ್ಸರ್‌ಗಳು ಕಂಚಿನ ಪದಕಕ್ಕೆ ತೃಪ್ತಿಪಟ್ಟುಕೊಂಡಿದ್ದಾರೆ. ಮತ್ತೊಂದೆಡೆ, ಭಾರತದ ಹೆಣ್ಣುಮಕ್ಕಳು ಈ ಕೂಟದಲ್ಲಿ ಗಮನಾರ್ಹ ಪ್ರದರ್ಶನವನ್ನು ಮುಂದುವರಿಸಿದ್ದು, ಒಟ್ಟು ಎಂಟು ಬಾಕ್ಸರ್‌ಗಳು ಫೈನಲ್ ಹಂತಕ್ಕೆ ಮುನ್ನಡೆದಿದ್ದಾರೆ. ಉಳಿದ ನಾಲ್ವರು ಬಾಕ್ಸರ್‌ಗಳು ಕಂಚಿನ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ. ಫೈನಲ್ ತಲುಪಿರುವ ಎಂಟೂ ಬಾಕ್ಸರ್‌ಗಳು ತಮ್ಮ ಅತ್ಯುತ್ತಮ ಪ್ರದರ್ಶನ ನೀಡಿ, ಚಿನ್ನದ ಪದಕ ತಮ್ಮದಾಗಿಸಿಕೊಳ್ಳುವ ಪ್ರಯತ್ನದಲ್ಲಿದ್ದಾರೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>